1 ನೇ ಹೆಚ್ಚುವರಿ ಸಿವಿಲ್ ದಂಡಾಧಿಕಾರಿಯವರ ನ್ಯಾಯಾಲಯ ಚನ್ನಗಿರಿ
**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: 2329/2021**

| ಪಿರ್ಯಾದುದಾರರು : | ವಿರುದ್ಧ | ಆರೋಪಿತರು: |
|---|---|---|
| ಚನ್ನಗಿರಿ ಪೊಲೀಸ್ ಠಾಣೆ | | ಎ 1.ರುದ್ರೇಶ<br>ಬಿನ್ ದುಮಪ್ಪ<br>ವಯಸ್ಸುಃ 45 ವರ್ಷ,<br>ವಾಸಃ ಕುರುಬರ ಬೀದಿ,<br>ಚನ್ನಗಿರಿ ಟೌನ್ , ದಾವಣಗೆರೆ ಜಿಲ್ಲೆ<br><br>ಎ 2. ಚಿಕ್ಕಪ್ಪ ಕೆ. ಎಸ್<br>ಬಿನ್ ಲೇಟ್ ಸಿದ್ದಪ್ಪ<br>ವಯಸ್ಸುಃ 43 ವರ್ಷ,<br>ವಾಸ: ಮಲ್ಲಿಗೆರೆ ರಸ್ತೆ, ಚನ್ನಗಿರಿ ಟೌನ್ ಮತ್ತು<br>ತಾಲ್ಲೂಕು, ದಾವಣಗೆರೆ ಜಿಲ್ಲೆ. |

**<u>ದೋಷಾರೋಪಣೆ</u>**

ನಾನು **ಕುಃ ಶಮ ಶ್ರೀವತ್ಸ,** 1 ನೇ ಹೆಚ್ಚುವರಿ ಸಿವಿಲ್.ನ್ಯಾ.ದಂಡಾಧಿಕಾರಿ, ಚನ್ನಗಿರಿ ಈ ಮೂಲಕ ನಿಮ್ಮ ಮೇಲೆ ಅಪಾಧಿಸುವುದೇನೆಂದರೆ ಆರೋಪಿತರಾದ ನೀವು:-

ಮೊದಲನೇಯದಾಗಿ ದಿನಾಂಕಃ19.05.2020 ರಂದು ಬೆಳಿಗ್ಗೆ 10.30 ಗಂಟೆಗೆ ಚಾ.ಸಾ 1 ರಿಂದ 3 ರವರುಗಳು ಚಾ.ಸಾ 1 ಮತ್ತು 2 ರವರಿಗೆ ಸೇರಿದ ಜಮೀನನ್ನು ನೋಡಿಕೊಂಡು ಬರಲು ಜಮೀನಿನ ಬಳಿ ಹೋದಾಗ ಆರೋಪಿತರಾದ ನೀವುಗಳು ಅಕ್ರಮ ಪ್ರವೇಶ ಮಾಡುವ ಮೂಲಕ ಭಾ.ದಂ.ಸಂ.ಕಲಂ.447 ಸಹ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಎರಡನೇಯದಾಗಿ ಮೇಲೆ ಹೇಳಿದ ಸ್ಥಳ, ಸಮಯ, ದಿನಾಂಕದಂದು 1 ನೇ ಆರೋಪಿಯಾದ ನೀವು ಚಾ.ಸಾ 1 ರವರಿಗೆ ಕೈ ಕಾಲುಗಳಿಂದ ಮೈ ಕೈ ಗೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಪಡಿಸುವುದರ ಮೂಲಕ ಭಾ.ದಂ.ಸಂ.ಕಲಂ 323 ಸಹ ಕಲಂ 34 ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಮೂರನೇಯದಾಗಿ ಮೇಲೆ ಹೇಳಿದ ಸ್ಥಳ, ಸಮಯ, ದಿನಾಂಕದಂದು 1 ನೇ ಆರೋಪಿಯಾದ ನೀವು ಚಾ.ಸಾ 1 ರವರಿಗೆ ಕಲ್ಲಿನಿಂದ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಪಡಿಸುವುದರ ಮೂಲಕ ಭಾ.ದಂ.ಸಂ.ಕಲಂ 324 ಸಹ ಕಲಂ 34 ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ನಾಲ್ಕನೇಯದಾಗಿ ಮೇಲೆ ಹೇಳಿದ ಸ್ಥಳ, ಸಮಯ, ದಿನಾಂಕದಂದು 1 ನೇ ಆರೋಪಿಯಾದ ನೀವು ಚಾ.ಸಾ 2 ರವರು ತೊಟ್ಟಿದ್ದ ಬಟ್ಟೆಯನ್ನು ಹಿಡಿದು ಎಳೆದಾಡಿ ಅವರ ಮಾನಕ್ಕೆ ಕುಂದುಂಟಾಗುವಂತೆ ಮಾಡುವ ಮೂಲಕ ಭಾ.ದಂ.ಸಂ.ಕಲಂ 354 ಸಹ ಕಲಂ 34 ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಐದನೇಯದಾಗಿ ಮೇಲೆ ಹೇಳಿದ ಸ್ಥಳ, ಸಮಯ, ದಿನಾಂಕದಂದು ಆರೋಪಿತರಾದ ನೀವುಗಳು ಚಾ.ಸಾ 1 ಮತ್ತು 2 ರವರಿಗೆ ಬೇವರಿಸಿ ಮುಂಡೆ, ಬೋಳಿಮಗನೇ , ಸೂಳೆ ಮಗನೇ ಎಂದು ಅವಾಚ್ಯ ಶಬ್ದಗಳಿಂದ ಬೈದು ಭಾ.ದಂ.ಸಂ.ಕಲಂ 504 ಸಹ ಕಲಂ 34 ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಆರನೇಯದಾಗಿ ಮೇಲೆ ಹೇಳಿದ ಸ್ಥಳ, ಸಮಯ, ದಿನಾಂಕದಂದು ಅಪರಾಧ ಮಾಡುವ ಉದ್ದೇಶದಿಂದ 2 ನೇ ಆರೋಪಿಯಾದ ನೀವು ಚಾ.ಸಾ 1 ಮತ್ತು 2 ರವರಿಗೆ ಹಿಡಿದುಕೊಂಡು ಹೊಡೆಯಿರಿ ಅಂತಾ ಉಳಿದ 1 ನೇ ಆರೋಪಿಯವರಿಗೆ ಪ್ರಚೋದನೆ ನೀಡುವುದರ ಮೂಲಕ ಭಾ.ದಂ.ಸಂ.ಕಲಂ 114 ಸಹ ಕಲಂ 34 ರ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ

ಕೊನೆಯದಾಗಿ ಮೇಲೆ ಹೇಳಿದ ಸ್ಥಳ, ಸಮಯ, ದಿನಾಂಕದಂದು ಆರೋಪಿತರಾದ ನೀವುಗಳು ಚಾ.ಸಾ 1 ಮತ್ತು 2 ರವರಿಗೆ ಪ್ರಾಣ ಬೆದರಿಕೆ ಹಾಕುವ ಮೂಲಕ ಭಾ.ದಂ.ಸಂ.ಕಲಂ 506 ಸಹ ಕಲಂ 34 ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಮೇಲೆ ಹೇಳಿದ ಆರೋಪಗಳ ಮೇಲೆ ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಿರುತ್ತೀರಾ ಎಂದು ನಿರ್ದೇಶಿಸಿದ್ದೇನೆ.

ದಿನಾಂಕ:07.12.2022 Sd/-

**( ಕು಼ ಶಮ ಶ್ರೀವತ್ಸ)**
**1 ನೇ ಹೆಚ್ಚುವರಿ ಪ್ರ.ದ.ನ್ಯಾ ,**
**ದಂಡಾಧಿಕಾರಿ, ಚನ್ನಗಿರಿ.**

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ಚನ್ನಗಿರಿ, ನ್ಯಾಯಾಲಯದಲ್ಲಿ**
**ಸಿಸಿ ನಂ:2329/2021**

**1. ಕರ್ನಾಟಕ ಸರ್ಕಾರ (ಚನ್ನಗಿರಿ ಪಿ.ಎಸ್ )**

**ವಿರುದ್ಧ**

ಎ 1.ರುದ್ರೇಶ

## ಆರೋಪಿಯ ಹೇಳಿಕೆ

1. ಈಗ ಓದಿ ಹೇಳಿದ ನಿನ್ನ ಮೇಲಿನ ಆಪಾದನೆಯನ್ನು ಕೇಳಿದ್ದಿಯಾ? ತಿಳಿಯಿತೇ?

ಉತ್ತರಃ

2. ಸದರಿ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆಯಾಗಬೇಕೋ?

ಉತ್ತರಃ

(ಆರೋಪಿತನಿಗೆ ಆರೋಪಣೆಯ ಸಾರಾಂಶವನ್ನು ದಿನಾಂಕಃ 07.12.2022 ರಂದು ತೆರೆದ ನ್ಯಾಯಾಲಯದಲ್ಲಿ ಓದಿ ಕೇಳಿ ಅವನುಃಳು ಕೊಟ್ಟ ಉತ್ತರವನ್ನು ಬರೆದುಕೊಳ್ಳಲಾಯಿತು.)

ಸ್ಥಳಃ ಚನ್ನಗಿರಿ
ದಿನಾಂಕಃ 07.12.2022

Sd/-
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನಗಿರಿ.

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ಚನ್ನಗಿರಿ, ನ್ಯಾಯಾಲಯದಲ್ಲಿ**
**ಸಿಸಿ ನಂ:2329/2021**

1. **ಕರ್ನಾಟಕ ಸರ್ಕಾರ (ಚನ್ನಗಿರಿ ಪಿ.ಎಸ್ )**

**ವಿರುದ್ಧ**

ಎ 2. ಚಿಕ್ಕಪ್ಪ ಕೆ. ಎಸ್

## ಆರೋಪಿಯ ಹೇಳಿಕೆ

1. ಈಗ ಓದಿ ಹೇಳಿದ ನಿನ್ನ ಮೇಲಿನ ಆಪಾದನೆಯನ್ನು ಕೇಳಿದ್ದಿಯಾ? ತಿಳಿಯಿತೇ?

ಉತ್ತರಃ

2. ಸದರಿ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆಯಾಗಬೇಕೋ?

ಉತ್ತರಃ

(ಆರೋಪಿತನಿಗೆ ಆರೋಪಣೆಯ ಸಾರಾಂಶವನ್ನು ದಿನಾಂಕಃ 07.12.2022 ರಂದು ತೆರೆದ ನ್ಯಾಯಾಲಯದಲ್ಲಿ ಓದಿ ಕೇಳಿ ಅವನುಃಳು ಕೊಟ್ಟ ಉತ್ತರವನ್ನು ಬರೆದುಕೊಳ್ಳಲಾಯಿತು.)

ಸ್ಥಳಃ ಚನ್ನಗಿರಿ
ದಿನಾಂಕಃ 07.12.2022

Sd/-
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನಗಿರಿ.

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ಚನ್ನಗಿರಿ, ನ್ಯಾಯಾಲಯದಲ್ಲಿ**
**ಸಿಸಿ ನಂ:2329/2021**

**1. ಕರ್ನಾಟಕ ಸರ್ಕಾರ (ಚನ್ನಗಿರಿ ಪಿ.ಎಸ್ )**

**ವಿರುದ್ಧ**

ಎ 3. ರಘು ಕೆ. ಎಸ್

## ಆರೋಪಿಯ ಹೇಳಿಕೆ

1. ಈಗ ಓದಿ ಹೇಳಿದ ನಿನ್ನ ಮೇಲಿನ ಆಪಾದನೆಯನ್ನು ಕೇಳಿದ್ದಿಯಾ? ತಿಳಿಯಿತೇ?

ಉತ್ತರಃ

2. ಸದರಿ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆಯಾಗಬೇಕೋ?

ಉತ್ತರಃ

(ಆರೋಪಿತನಿಗೆ ಆರೋಪಣೆಯ ಸಾರಾಂಶವನ್ನು ದಿನಾಂಕಃ 07.12.2022 ರಂದು ತೆರೆದ ನ್ಯಾಯಾಲಯದಲ್ಲಿ ಓದಿ ಕೇಳಿ ಅವನುಃಳು ಕೊಟ್ಟ ಉತ್ತರವನ್ನು ಬರೆದುಕೊಳ್ಳಲಾಯಿತು.)

ಸ್ಥಳಃ ಚನ್ನಗಿರಿ
ದಿನಾಂಕಃ 07.12.2022

Sd/-
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನಗಿರಿ.